ಕ.ವಿ.ಪ್ರ.ನಿ.ನಿ. ಮತ್ತು ವಿಸಕಂಗಳ ಪಿಂಚಣಿ ಮತ್ತು ಉಪದಾನ ಟ್ರಸ್ಟ್
KPTCL AND ESCOMs PENSION AND GRATUITY TRUSTS
Ph No. 080-22291150
Fax No. 080-22223558
E-mail: pgtrustkptcl@gmail.com

6ನೇ ಮಹಡಿ,
ಕಾವೇರಿ ಭವನ,
ಬೆಂಗಳೂರು-560009.

ಸಂಖ್ಯೆ. ಕೆಇಪಿಜಿಟಿ/ಕೆಸಿಒ123/ಪಿ19/2021-22/Cyl-27 ದಿನಾಂಕ 18 FEB 2022

# ಸುತ್ತೋಲೆ

ವಿಷಯ: PPMS ತಂತ್ರಾಂಶದಲ್ಲಿ ಪಿಂಚಣಿ/ಕುಟುಂಬ ಪಿಂಚಣಿದಾರರ ಎಲ್ಲಾ ವೈಯಕ್ತಿಕ ಮಾಹಿತಿ/ವಿವರಗಳನ್ನು ಕಡ್ಡಾಯವಾಗಿ ನಮೂದಿಸುವ ಕುರಿತು.

ಉಲ್ಲೇಖ: 1. ಈ ಕಛೇರಿ ಸುತ್ತೋಲೆ ಸಂಖ್ಯೆ. ಕೆಇಪಿಜಿಟಿ/ಕೆಸಿಒ123/ಪಿ19/2017-18/ಸಿವೈಎಸ್-09 ದಿನಾಂಕ 07.02.2018.
2. ಈ ಕಛೇರಿ ಪತ್ರ ಸಂಖ್ಯೆ. ಕೆಇಪಿಜಿಟಿ/ಕೆಸಿಇಒ123/ಪಿ19/2020-21/ಸಿವೈಎಸ್-07 ದಿನಾಂಕ 01.03.2021.
3. ಈ ಕಛೇರಿ ಸುತ್ತೋಲೆ ಸಂಖ್ಯೆ. ಕೆಇಪಿಜಿಟಿ/ಕೆಸಿಒ123/ಪಿ10/IV/2018-19/ಸಿವೈಎಸ್-13 ದಿನಾಂಕ 23.08.2021.

************

ಪಿಂಚಣಿ ಮತ್ತು ಕುಟುಂಬ ಪಿಂಚಣಿ ಪಾವತಿ ನಿರ್ವಹಣೆಗಾಗಿ ಕವಿಪ್ರನಿನಿ ಮತ್ತು ವಿಸಕಂಗಳ ಪಿಂಚಣಿ ಮತ್ತು ಉಪದಾನ ಟ್ರಸ್ಟ್ ಕವಿಪ್ರನಿನಿಯ ಗಣಕಯಂತ್ರ ಶಾಖೆಯ ಸಹಯೋಗದೊಂದಿಗೆ ವೆಬ್ ಆಧಾರಿತ ಪಿಂಚಣಿ ಪಾವತಿ ನಿರ್ವಹಣೆ ವ್ಯವಸ್ಥೆ (Pension Payment Management System) ಎಂಬ ತಂತ್ರಾಂಶವನ್ನು ಅನುಷ್ಠಾನಗೊಳಿಸಲಾಗಿರುತ್ತದೆ. ಸದರಿ ತಂತ್ರಾಂಶದ ಡಾಟಾಬೇಸ್‌ನಲ್ಲಿ ಪಿಂಚಣಿ/ಕುಟುಂಬ ಪಿಂಚಣಿದಾರರಿಗೆ ಸಂಬಂಧಿಸಿದ ಹಲವಾರು ಮಾಹಿತಿಗಳನ್ನು ಸಂಗ್ರಹಿಸಬಹುದಾಗಿರುತ್ತದೆ.

ಉಲ್ಲೇಖ-1ರ ಸುತ್ತೋಲೆಯಲ್ಲಿ ಪಿಂಚಣಿ ಬಟವಾಡೆ ಘಟಕಗಳು ಪಿಂಚಣಿ/ಕುಟುಂಬ ಪಿಂಚಣಿದಾರರ ವಿಳಾಸ, ಈ-ಮೇಲ್ ಮತ್ತು ದೂರವಾಣಿ/ಮೊಬೈಲ್‌ಗಳ ಮಾಹಿತಿಗಳನ್ನು ಕ್ರೋಢೀಕರಿಸಿ ಡಾಟಾಬೇಸ್ ನಿರ್ವಹಿಸಲು ಕ್ರಮ ಕೈಗೊಳ್ಳಲು ಸೂಚಿಸಲಾಗಿರುತ್ತದೆ.

ಉಲ್ಲೇಖ-2ರ ಪತ್ರದಲ್ಲಿ ಪಿಂಚಣಿದಾರರ ಅನುಕೂಲಕ್ಕಾಗಿ ಡಿಜಿಟಲ್ ಜೀವನ ಪ್ರಮಾಣ ಪತ್ರ ಪಡೆಯುವ ವ್ಯವಸ್ಥೆಯನ್ನು ಕವಿಪ್ರನಿನಿ/ವಿಸಕಂಗಳಲ್ಲಿಯೂ ಹೆಚ್ಚುವರಿ ಆಯ್ಕೆಯಾಗಿ ಅಳವಡಿಸಿಕೊಳ್ಳಲು ಅನುವಾಗುವಂತೆ ಪಿಂಚಣಿ/ಕುಟುಂಬ ಪಿಂಚಣಿದಾರರಿಂದ ಆಧಾರ್ ಕಾರ್ಡ್ ಪ್ರತಿ, ಒಪ್ಪಿಗೆ ಪತ್ರ ಮತ್ತು ಆಧಾರ್‌ಗೆ ಲಿಂಕ್ ಆಗಿರುವ ಮೊಬೈಲ್ ಸಂಖ್ಯೆಯನ್ನು ಪಡೆದು ಪಿಪಿಎಂಎಸ್ ತಂತ್ರಾಂಶದ ಡಾಟಾಬೇಸ್‌ನಲ್ಲಿ ಕಡ್ಡಾಯವಾಗಿ ನಮೂದಿಸಲು ತಿಳಿಸಲಾಗಿರುತ್ತದೆ.

ಪಿಂಚಣಿ ಮತ್ತು ಉಪದಾನ ಟ್ರಸ್ಟ್ ಪ್ರತಿ ಆರ್ಥಿಕ ವರ್ಷದ ಅಂತ್ಯಕ್ಕೆ ಇರುವಂತೆ ಪಿಂಚಣಿ ಮತ್ತು ಉಪದಾನ ಫಂತಿಗೆ ದರಗಳನ್ನು ನಿಗದಿಪಡಿಸುವ ಸಂಬಂಧ ಪ್ರಾತ್ಯಕ್ಷಿಕ ಮೌಲ್ಯಮಾಪನ ಕಾರ್ಯವನ್ನು ಕೈಗೊಳ್ಳುತ್ತದೆ. ಇದಕ್ಕನುಸಾರವಾಗಿ, ಸಿಬ್ಬಂದಿಗಳ ಮತ್ತು ಪಿಂಚಣಿ/ಕುಟುಂಬ ಪಿಂಚಣಿದಾರರ ಮಾಹಿತಿಗಳನ್ನು ಪ್ರೊಫಾರ್ಮ 1 ರಿಂದ 7ರ ಅನುಬಂಧಗಳಲ್ಲಿ ಲೆಕ್ಕಘಟಕಗಳಿಂದ ಸಂಗ್ರಹಿಸಿ ಕ್ರೋಢೀಕರಿಸಲಾಗುತ್ತಿದೆ. ಈ ಪ್ರೊಫಾರ್ಮಗಳ ತಯಾರು ಮಾಡುವ ಸಂದರ್ಭದಲ್ಲಿ ಪಿಂಚಣಿ/ಕುಟುಂಬ ಪಿಂಚಣಿದಾರರಿಗೆ ಸಂಬಂಧಿಸಿದ ಬಹುತೇಕ ಮಾಹಿತಿಯನ್ನು ಪಿಪಿಎಂಎಸ್ ತಂತ್ರಾಂಶದ ಡಾಟಾಬೇಸ್‌ನಿಂದ ಪಡೆಯಬಹುದಾಗಿರುತ್ತದೆ. ಪ್ರಸಕ್ತ ಆರ್ಥಿಕ ವರ್ಷದ ಅಂತ್ಯಕ್ಕಿರುವಂತೆ ಪ್ರಾತ್ಯಕ್ಷಿಕ ಮೌಲ್ಯಮಾಪನ ಕಾರ್ಯಕ್ಕೆ ಅವಶ್ಯಕವಿರುವ ಪಿಂಚಣಿ/ಕುಟುಂಬ ಪಿಂಚಣಿದಾರರ ಮಾಹಿತಿಗಳನ್ನು ನೇರವಾಗಿ ಪಿಪಿಎಂಎಸ್ ತಂತ್ರಾಂಶದ ಡಾಟಾಬೇಸ್‌ನಿಂದ ಸೆಳೆದು ಉಪಯೋಗಿಸುವ ಕುರಿತು ಆಲೋಚಿಸಲಾಗುತ್ತಿದೆ. ಇದರಿಂದ ಪಿಂಚಣಿ ಬಟವಾಡೆ ಲೆಕ್ಕಘಟಕಗಳ ಸಿಬ್ಬಂದಿ/ಅಧಿಕಾರಿಗಳ ಶ್ರಮವನ್ನು ಹಾಗೂ ಅಮೂಲ್ಯ ಸಮಯವನ್ನು ಉಳಿಸಬಹುದಾಗಿರುತ್ತದೆ.

ಆದರೆ, ಪಿಂಚಣಿ ಪಾವತಿ ನಿರ್ವಹಣೆ ವ್ಯವಸ್ಥೆ (PPMS) ತಂತ್ರಾಂಶದ ಡಾಟಾಬೇಸ್‌ನ್ನು ಪರಿಶೀಲಿಸಿದಾಗ, ಪಿಂಚಣಿ/ಕುಟುಂಬ ಪಿಂಚಣಿದಾರರ ಹುಟ್ಟಿದ ದಿನಾಂಕ, ಆಧಾರ್ ಸಂಖ್ಯೆ ಮತ್ತು ಮೊಬೈಲ್ ಸಂಖ್ಯೆ ಇತ್ಯಾದಿಗಳನ್ನು ನಮೂದಿಸದೇ ಇರುವುದನ್ನು ಗಮನಿಸಲಾಗಿದೆ.

**ಪಿಂಚಣಿ ಬಟವಾಡೆ ಲೆಕ್ಕಘಟಕಗಳು ಆದ್ಯತೆ ಮೇರೆಗೆ ಎಲ್ಲ ಮಾಹಿತಿಗಳನ್ನು ಫೆಬ್ರವರಿ-2022ರ ಅಂತ್ಯದೊಳಗೆ PPMS ತಂತ್ರಾಂಶದ ಡಾಟಾಬೇಸ್‌ನಲ್ಲಿ ಕಡ್ಡಾಯವಾಗಿ ನಮೂದಿಸಲು ಕ್ರಮ ಕೈಗೊಳ್ಳುವುದು.** ಪಿಂಚಣಿ/ಕುಟುಂಬ ಪಿಂಚಣಿದಾರರ ಜನ್ಮ ದಿನಾಂಕವನ್ನು ಪಿಪಿಒ ಆದೇಶದ ಪ್ರತಿ, ಆಧಾರ್ ಅಥವಾ ಪ್ಯಾನ್ ಕಾರ್ಡ್‌ನಿಂದ ಪಡೆಯಬಹುದಾಗಿರುತ್ತದೆ.

PPMS ತಂತ್ರಾಂಶದಲ್ಲಿ ಪಿಂಚಣಿ/ಕುಟುಂಬ ಪಿಂಚಣಿದಾರರ ಎಲ್ಲ ಮಾಹಿತಿಗಳನ್ನು ಫೆಬ್ರವರಿ-2022ರ ಅಂತ್ಯದೊಳಗೆ PPMS ತಂತ್ರಾಂಶದ ಡಾಟಾಬೇಸ್‌ನಲ್ಲಿ ಕಡ್ಡಾಯವಾಗಿ ನಮೂದಿಸಲು ಕಾಲಮಿತಿಯೊಳಗೆ 100% ಪ್ರಗತಿ ಸಾಧಿಸುವ ದಿಸೆಯಲ್ಲಿ ಅತೀ ಜರೂರು ಸೂಕ್ತ ಕ್ರಮ ಕೈಗೊಳ್ಳುವಂತೆ ತಮ್ಮ ಕಾರ್ಯ ವ್ಯಾಪ್ತಿಯ ಪಿಂಚಣಿ ಬಟವಾಡೆ ಲೆಕ್ಕಘಟಕಗಳಿಗೆ ಕಟ್ಟುನಿಟ್ಟಾದ ನಿರ್ದೇಶನವನ್ನು ನೀಡುವಂತೆ ಆಯಾ ಕಂಪನಿಯ ಆರ್ಥಿಕ ಸಲಹೆಗಾರರನ್ನು ಕೋರಿದೆ. ಅಲ್ಲದೆ, ಈ ವಿಷಯಕ್ಕೆ ಸಂಬಂಧಿಸಿದಂತೆ, ಉಪ ಲೆಕ್ಕನಿಯಂತ್ರಣಾಧಿಕಾರಿ/ ನಿಯಂತ್ರಣಾಧಿಕಾರಿಗಳು ತಮ್ಮ ವೃತ್ತ/ವಲಯ ವ್ಯಾಪ್ತಿಯಲ್ಲಿ ಬರುವ ಪಿಂಚಣಿ ಬಟವಾಡೆ ಲೆಕ್ಕಘಟಕಗಳ ಕಾರ್ಯ ವಿಧಾನದ ಪ್ರಗತಿಯನ್ನು ವೈಯಕ್ತಿಕ ಗಮನಹರಿಸಿ ಮೇಲ್ವಿಚಾರಣೆ ಮಾಡುವಂತೆ ನಿರ್ದೇಶನ ನೀಡುವಂತೆಯೂ ಸಹ ಕೋರಿದೆ.

18/02/22

ನಿರ್ದೇಶಕರು(ಹಣಕಾಸು), ಕವಿಪ್ರನಿನಿ ಮತ್ತು
ಅಧ್ಯಕ್ಷರು, ಪಿಂ & ಉ ಟ್ರಸ್ಟ್.

<u>ಪ್ರತಿಗಳು:</u>

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ/ನಿರ್ದೇಶಕರು(ಹಣಕಾಸು), ಬೆಸ್ಕಾಂ/ಹೆಸ್ಕಾಂ.
3. ನಿರ್ದೇಶಕರು(ವಾಣಿಜ್ಯ), ಪಿಸಿಕೆಎಲ್
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂ
5. ಎಲ್ಲಾ ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ಎಸ್ಕಾಂ
6. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆ.ಮತ್ತು ಮಾ.ಸಂ) ಕವಿಪ್ರನಿನಿ,

<u>ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ https://kptcl.karnataka.gov.in ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.</u>

1. ಎಲ್ಲಾ ಅಧೀಕ್ಷಕ ಇಂಜಿನಿಯರ್/ನಿಯಂತ್ರಣಾಧಿಕಾರಿ, ಎಲ್ಲಾ ಕವಿಪ್ರನಿನಿ/ಎಸ್ಕಾಂ
2. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್/ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ
3. ಎಲ್ಲಾ ಲೆಕ್ಕಾಧಿಕಾರಿಗಳು/ಲೆಕ್ಕಾಧಿಕಾರಿಗಳು(ಆಂ.ಪ),ಕವಿಪ್ರನಿನಿ/ಎಸ್ಕಾಂ

<u>ಪ್ರತಿಗಳು ಮಾಹಿತಿಗಾಗಿ:</u>

1. ಶ್ರೀ ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿನಿ ನೌಕರರ ಸಂಘ (ನೊಂದಣಿ ಸಂಖ್ಯೆ 659), ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು.
2. ಶ್ರೀ ಟಿ.ಎಂ.ಶಿವಪ್ರಕಾಶ್, ಅಧ್ಯಕ್ಷರು, ಕವಿಮಂ ಇಂಜಿನಿಯರುಗಳ ಸಂಘ ಬೆಂಗಳೂರು ಮತ್ತು ನಿರ್ದೇಶಕರು, ಕವಿಪ್ರನಿನಿ ಹಾಗೂ ಎಲ್ಲಾ ಎಸ್ಕಾಂಗಳು
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ನೌಕರರ ಸಂಘ, ಬೆಂಗಳೂರು
4. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಇಂಜಿನಿಯರುಗಳ ಸಂಘ, ಬೆಂಗಳೂರು
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಡಿಪ್ಲೋಮ ಇಂಜಿನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂ ಪ.ಜಾ/ಪ.ಪಂ ಅಧಿಕಾರಿಗಳ ಸಂಘ, ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ, ಪಿಂಚಣಿದಾರರ ಸಂಘ, ಕಾವೇರಿ ಭವನ, ಬೆಂಗಳೂರು.